# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 381 (408) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 18-02-2022. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರಿಗೆ ಸರ್ಕಾರ ನೀಡುತ್ತಿರುವ ವೇತನ ಹಾಗೂ ಇನ್ನಿತರೆ ಸೌಲಭ್ಯಗಳೇನು; | 1. ರಾಜ್ಯದ ಮೂರು ಸ್ತರದ ಪಂಚಾಯತ್ ಸಂಸ್ಥೆಗಳ ಅಧ್ಯಕ್ಷರು ಉಪಾಧ್ಯಕ್ಷರು ಮತ್ತು ಸದಸ್ಯರಿಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 116 ಜಿಪಸ 2017, ದಿನಾಂಕ: 03.05.2017 ರನ್ವಯ ಮಾಹೆಯಾನ ಗೌರವಧನವನ್ನು ನೀಡಲಾಗುತ್ತಿದೆ.<br>2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 155 ಜಿಪಸ 2003, ದಿನಾಂಕ:01-08-2003ರನ್ವಯ ಉಪವೇಶನ ಶುಲ್ಕವನ್ನು ನೀಡಲಾಗುತ್ತಿದೆ.<br>3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 65 ತಾಪಸ 2011, ದಿನಾಂಕ: 28.09.2011 ರನ್ವಯ ತಾಲ್ಲೂಕು ಪಂಚಾಯತ್ ಅಧ್ಯಕ್ಷರು/ಉಪಾಧ್ಯಕ್ಷರಿಗೆ ಸೌಲಭ್ಯಗಳನ್ನು ನೀಡಲಾಗುತ್ತಿದೆ.<br>4. ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತ್ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನ ಭತ್ಯೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. |

| | | |
|---|---|---|
| (ಆ) | ಸದರಿಯವರಿಗೆ ಗೌರವಧನ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕಡತ ಸಂಖ್ಯೆ: ಗ್ರಾಅಪಂರಾ 298 ಜಿಪಸ 2021 ರಲ್ಲಿ ದಿನಾಂಕ:15.11.2021 ರಂದು ಗ್ರಾಮ ಪಂಚಾಯತಿ ಸದಸ್ಯರ ಗೌರವಧನವನ್ನು ಹೆಚ್ಚಿಸುವ ಕುರಿತು ಸರ್ಕಾರದಿಂದ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿ, ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 549 ವೆಚ್ಚ 6/2021 ದಿನಾಂಕ: 29.11.2021 ರಲ್ಲಿ ಪ್ರಸ್ತುತ ಹೆಚ್ಚುವರಿ ಹಣಕಾಸು ಕಾರ್ಯಭಾರವನ್ನು ಭರಿಸಲು ಸಾಧ್ಯವಿಲ್ಲವೆಂದು ತಿಳಿಸಿರುತ್ತಾರೆ. |
| (ಇ) | ತಾಲ್ಲೂಕು ಪಂಚಾಯತಿ ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರುಗಳಿಗೆ ಹಾಗೂ ಸದಸ್ಯರುಗಳಿಗೆ ಗೌರವಧನ ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವೇನು? (ವಿವರ ನೀಡುವುದು) | ಉದ್ಭವಿಸುವುದಿಲ್ಲ. |

**ಸಂಖ್ಯೆ: ಗ್ರಾಅಪಂರಾ 76 ಜಿಪಸ 2022**

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು